# ಕರ್ನಾಟಕ ವಿಧಾನ ಪರಿಷತ್

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 726 (825)

ಸದಸ್ಯರ ಹೆಸರು : ಶ್ರೀ ಲಹರ್ ಸಿಂಗ್ ಸಿರೋಯಾ
(ವಿಧಾನ ಸಭೆಯಿಂದ ಚುನಾಯಿತರಾದವರು)

ಉತ್ತರಿಸಬೇಕಾದ ದಿನಾಂಕ : 25.09.2020.

ಉತ್ತರಿಸುವ ಸಚಿವರು : ಮಾನ್ಯ ಪ್ರವಾಸೋದ್ಯಮ ಮತ್ತು ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು.

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಕನ್ನಡ ಶಾಸ್ತ್ರೀಯ ಅಧ್ಯಯನ ಕೇಂದ್ರದ ಪ್ರತ್ಯೇಕ ಕಟ್ಟಡಗಳನ್ನು ನಿರ್ಮಿಸುವ ಯೋಜನೆ ಸರ್ಕಾರದ ಪರಿಶೀಲನೆಯಲ್ಲಿದೆಯೇ: | ಕನ್ನಡ ಶಾಸ್ತ್ರೀಯ ಅಧ್ಯಯನ ಕೇಂದ್ರವನ್ನು ಉನ್ನತೀಕರಿಸಿ ಸ್ವಾಯತ್ತತೆ ನೀಡಿ ಶಾಸ್ತ್ರೀಯ ಕನ್ನಡ ಸ್ವಾಯತ್ತ ಕೇಂದ್ರದ ಕಟ್ಟಡ ನಿರ್ಮಾಣಕ್ಕಾಗಿ ಭಾರತೀಯ ಭಾಷಾ ಸಂಸ್ಥೆ, ಮೈಸೂರು ಇವರಿಂದ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿರುತ್ತದೆ. ಪ್ರಸ್ತುತ ಕನ್ನಡ ಶಾಸ್ತ್ರೀಯ ಅಧ್ಯಯನ ಕೇಂದ್ರಕ್ಕೆ ಮೈಸೂರು ವಿಶ್ವವಿದ್ಯಾಲಯದ ಆವರಣದಲ್ಲಿ ಇರುವ ಕೌಶಲ್ಯಾಭಿವೃದ್ಧಿ ಇಲಾಖೆಯ ಕಟ್ಟಡದಲ್ಲಿ ಕೆಲಸ ನಿರ್ವಹಿಸಲು ಸ್ಥಳಾವಕಾಶ ಮಾಡಿ ಕೊಡಲಾಗಿದೆ. |
| ಆ) | ಈ ಅಧ್ಯಯನ ಕೇಂದ್ರ ನಿರ್ಮಿಸಲು ಗುರುತಿಸಿರುವ ಸ್ಥಳ ಯೋಜನೆಯ ವೆಚ್ಚ, ನಿಗಧಿಪಡಿಸಲಾಗಿರುವ ಗಡುವು ಏನು? (ಪೂರ್ಣ ವಿವರಗಳನ್ನು ನೀಡುವುದು) | ಶಾಸ್ತ್ರೀಯ ಕನ್ನಡ ಸ್ವಾಯತ್ತ ಕೇಂದ್ರದ ಸ್ಥಾಪನೆಗಾಗಿ ಸರ್ಕಾರದ ಆದೇಶ ಸಂಖ್ಯೆ: ಇಡಿ 93 ಯುಎಂವಿ 2019, ದಿನಾಂಕ: 15.09.2020ರನ್ವಯ ಮೈಸೂರು ವಿಶ್ವವಿದ್ಯಾನಿಲಯದ ಆವರಣದಲ್ಲಿನ 04 ಎಕರೆ 02 ಗುಂಟೆ ಜಾಗವನ್ನು 30 ವರ್ಷಗಳ ಅವಧಿಗೆ ಗುತ್ತಿಗೆ ಆಧಾರದಲ್ಲಿ ನೀಡಲಾಗಿರುತ್ತದೆ ಹಾಗೂ ಕಟ್ಟಡ ನಿರ್ಮಾಣಕ್ಕಾಗಿ ಹಾಗೂ ಹುದ್ದೆಗಳ ಸೃಜನೆಗಾಗಿ ರೂ. 85 ಕೋಟಿಗಳ ಸಮಗ್ರ ಪ್ರಸ್ತಾವನೆಯನ್ನು ಭಾರತೀಯ ಭಾಷಾ ಸಂಸ್ಥೆಯಿಂದ ಕೇಂದ್ರ ಶಿಕ್ಷಣ ಇಲಾಖೆಗೆ ಸಲ್ಲಿಸಲಾಗಿದ್ದು ಅಲ್ಲಿ ಪರಿಶೀಲನೆ ಹಂತದಲ್ಲಿರುತ್ತದೆ. |

ಸಂಖ್ಯೆ: ಕಸಂವಾ 134 ಕೆಒಎಲ್ ಆಕ 2020.

(ಸಿ.ಟಿ. ರವಿ)
ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ
ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು.